**<u>ದಿನಾಂಕಃ 07.02.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಎಸ್.ಜೆ ವಕೀಲರಿಂದಃ</u>**

ದಿನಾಂಕ 18.01.1995 ರ ನೊಂದಾವಣೆಯಾಗದ ಪಂಚಾಯಿತಿಯ ಖುಷ್ಕಿ ಜಮೀನಿನ ಶುದ್ಧ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದು (ತಕರಾರಿಗೆ ಒಳಪಟ್ಟು ಮತ್ತು ಸಾಬೀತು ಪಡಿಸುವಿಕೆಗೆ ಒಳಪಟ್ಟು ನಿಶಾನೆಗೊಳಪಡಿಸಲು ತೀರ್ಮಾನಿಸಲಾಯಿತು) ಅದನ್ನು ನಿಪಿ-1 ಎಂದು, ಅಸಲು ದಾವಾ ಸಂಖ್ಯೆ 318/2012 ರ ಡಿಕ್ರಿಯ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ದಿನಾಂಕ 27.12.2014 ರ ಭೋಗ್ಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ಮೆಣಸಿಕ್ಯಾತನಹಳ್ಳಿ ಗ್ರಾಮದ ಸರ್ವೆ ನಂಬರ್ 248/1 ರ ಪಹಣಿ ಪತ್ರಿಕೆಯ ಗಣಕೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

<u>ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರಿದ ಮುಖ್ಯವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ